**National**
**Kannada**
**12.01.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ವಿಕಸಿತ ಭಾರತ ಸಂವಾದ; ಯುವ ನಾಯಕರೊಂದಿಗೆ ಇಂದು ಪ್ರಧಾನಿ ವಿಚಾರ ಅನುಭವ ವಿನಿಮಯ

೨. ಇಂದು ದೇಶಾದ್ಯಂತ ರಾಷ್ಟ್ರೀಯ ಯುವ ದಿನೋತ್ಸವ ಆಚರಣೆ; ಸ್ವಾಮಿ ವಿವೇಕಾನಂದರಿಗೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿಯವರಿಂದ ಗೌರವನಮನ

೩. ಸ್ಪೇಡೆಕ್ಸ್ ಪ್ರಯೋಗ; ಉಪಗ್ರಹಗಳನ್ನು ೩ ಮೀಟರ್ ಹತ್ತಿರಕ್ಕೆ ತರುವಲ್ಲಿ ಇಸ್ರೋ ಯಶಸ್ವಿ

೪. ಅಮೆರಿಕದ ಅಧ್ಯಕ್ಷರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾರತ ಪ್ರತಿನಿಧಿಸಲಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್

೫. ಮಹಿಳಾ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿ; ಐರ್ಲೆಂಡ್ ಎದುರು ಟಾಸ್ ಗೆದ್ದು ಭಾರತ ಬ್ಯಾಟಿಂಗ್

***************

ರಾಷ್ಟ್ರೀಯ ಯುವ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯ ಭಾರತ ಮಂಟಪದಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂದು ಭಾಗವಹಿಸಿದ್ದಾರೆ.

ಇದಕ್ಕೂ ಮುನ್ನ ಅವರು, ವಸ್ತು ಪ್ರದರ್ಶನವನ್ನು ವೀಕ್ಷಿಸಿದರು ಹಾಗೂ ಯುವ ನಾಯಕರೊಂದಿಗೆ ಸಂವಾದ ನಡೆಸಿದರು.

ಈ ಕುರಿತು ಒಂದು ವರದಿ

ವಿಕಸಿತ ಭಾರತ ಚಾಲೆಂಜ್‌ಗಾಗಿ ಆಯ್ಕೆಯಾಗಿರುವ ಮೂರು ಸಾವಿರ ಯುವ ನಾಯಕರು ವಿಕಸಿತ ಭಾರತ ಕುರಿತ ತಮ್ಮ ದೃಷ್ಟಿಕೋನವನ್ನು ಪ್ರಧಾನಿ ನರೇಂದ್ರ ಮೋದಿಯವರ ಸಮ್ಮುಖದಲ್ಲಿ ಪ್ರಸ್ತುತಪಡಿಸಿದರು. ದೇಶ ಎದುರಿಸುತ್ತಿರುವ ಪ್ರಮುಖ ಸವಾಲುಗಳಿಗೆ ಪರಿಹಾರ ಮತ್ತು ನವೀನ ಆಲೋಚನೆಗಳನ್ನು ಈ ಪ್ರಸ್ತುತಿಗಳು ಪ್ರತಿಬಿಂಬಿಸಿವೆ.

ಶುಕ್ರವಾರದಿಂದ ನಡೆಯುತ್ತಿರುವ ಈ ಕಾರ್ಯಕ್ರಮ ಯುವಕರಿಗೆ ವಿಕಸಿತ ಭಾರತಕ್ಕಾಗಿ ನವೀನ ಪರಿಹಾರಗಳನ್ನು ಪ್ರಸ್ತುತಪಡಿಸಲು ವೇದಿಕೆ ಒದಗಿಸಿದೆ.  ಬಳಿಕ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ಮೂರು ಸಾವಿರ ಯುವ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ.

ಇದೇ ವೇಳೆ ಅವರು, ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವ ಯುವ ನಾಯಕರು, ಹತ್ತು ಆಯ್ದ ವಿಷಯಗಳ ಮೇಲೆ ಬರೆದ, ಅತ್ಯುತ್ತಮ ಲೇಖನಗಳ ಸಂಕಲನವನ್ನು ಬಿಡುಗಡೆಗೊಳಿಸಲಿದ್ದಾರೆ. ತಂತ್ರಜ್ಞಾನ, ಸುಸ್ಥಿರತೆ, ಮಹಿಳಾ ಸಬಲೀಕರಣ, ಉತ್ಪಾದನೆ ಹಾಗೂ ಕೃಷಿ ಆಯ್ದ ಕೆಲವು ವಿಷಯಗಳಾಗಿವೆ.

ಬಳಿಕ ಪ್ರಧಾನಿ ಯುವ ನಾಯಕರೊಂದಿಗೆ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದು, ಇದು ವಿಚಾರ, ಅನುಭವ ಮತ್ತು ಆಕಾಂಕ್ಷೆಗಳನ್ನು ಪರಸ್ಪರ ವಿನಿಮಯ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಿದೆ.

****************

ಇಂದು ದೇಶಾದ್ಯಂತ ರಾಷ್ಟ್ರೀಯ ಯುವದಿನೋತ್ಸವನ್ನು ಆಚರಿಸಲಾಗುತ್ತಿದೆ. ದೇಶ ಕಂಡ ಶ್ರೇಷ್ಠ ಆದ್ಯಾತ್ಮಿಕ ನಾಯಕ, ಚಿಂತಕ, ತತ್ವಜ್ಞಾನಿ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಸ್ಮರಣಾರ್ಥ ಈ ದಿನವನ್ನು ಯುವದಿನವನ್ನಾಗಿ ಆಚರಿಸಲಾಗುತ್ತಿದೆ.

ಸ್ವಾಮಿ ವಿವೇಕಾನಂದರ ಜನ್ಮ ವರ್ಷಾಚರಣೆ ಹಿನ್ನೆಲೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ವಿವೇಕಾನಂದರಿಗೆ ಗೌರವ ನಮನ ಸಲ್ಲಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ ಅವರು, ಸ್ವಾಮಿ ವಿವೇಕಾನಂದರು ದೇಶದ ಶ್ರೇಷ್ಠ ಆದ್ಯಾತ್ಮಿಕ ಸಂದೇಶವನ್ನು ಪಾಶ್ಚಾತ್ಯ ಜಗತ್ತಿಗೆ ಕೊಂಡೊಯ್ದರು. ದೇಶದ ಯುವಕರನ್ನು ತಮ್ಮ ಸಾಮರ್ಥ್ಯವನ್ನು ಅರಿತು, ರಾಷ್ಟ್ರ ನಿರ್ಮಾಣದೆಡೆಗೆ ಕಾರ್ಯೋನ್ಮುಖರಾಗಿ, ಮನುಕುಲದ ಸೇವೆ ಮಾಡಲು ಪ್ರೇರೇಪಿಸಿದರು ಎಂದು ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಭಾರತೀಯ ಆದ್ಯಾತ್ಮಿಕ ಜ್ಞಾನದ ಪರಂಪರೆಯ ಸಂಕೇತವಾಗಿದ್ದ ಸ್ವಾಮಿ ವಿವೇಕಾನಂದರು ಹೆಮ್ಮೆ, ಆತ್ಮವಿಶ್ವಾಸದೊಂದಿಗೆ ಮನುಕುಲದ ಸೇವೆ ಸಲ್ಲಿಸುವಂತೆ ಭಾರತೀಯರಿಗೆ ಕರೆ ನೀಡಿದ್ದರು. ಯುವಕರಿಗೆ ಅವರು, ನೀಡಿದ ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ ಎನ್ನುವ ಸಂದೇಶ ಇಂದು ಸ್ವಯಂ ಸಭಲೀಕರಣದ ಮಂತ್ರವಾಗಿದೆ ಎಂದಿದ್ದಾರೆ.

ಯುವಕರಿಗೆ ಸ್ಫೂರ್ತಿಯಾಗಿರುವ ಸ್ವಾಮಿ ವಿವೇಕಾನಂದರು, ಯುವ ಮನಸ್ಸುಗಳಲ್ಲಿ ಉತ್ಸಾಹ ಮತ್ತು ಧ್ಯೇಯವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಬಲಿಷ್ಠ ಹಾಗೂ ಅಭಿವೃದ್ಧಿ ಹೊಂದಿದ ಭಾರತದ ಅವರ ದೃಷ್ಟಿಕೋನವನ್ನು ಸಹಕಾರಗೊಳಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

****************

ಸ್ಪೆಡೆಕ್ಸ್ ಕಾರ್ಯಕ್ರಮದ ಅಡಿಯಲ್ಲಿ ಡಾಕಿಂಗ್‌ಗೂ ಮುನ್ನ ತನ್ನ ಎರಡು ಉಪಗ್ರಹಗಳನ್ನು ಸ್ಥಿರಗೊಳಿಸುವಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಗಮನಾರ್ಹ ಪ್ರಗತಿ ಸಾಧಿಸಿದೆ.

ಚೇಸರ್-ಎಸ್‌ಡಿಎಕ್ಸ್-೧ ಮತ್ತು ಟಾರ್ಗೆಟ್-ಎಕ್ಸ್‌ಡಿಎಕ್ಸ್-೨ ಉಪಗ್ರಹಗಳನ್ನು ೩ ಮೀಟರ್ ಹತ್ತಿರಕ್ಕೆ ತರುವಲ್ಲಿ ಇಸ್ರೋ ಯಶಸ್ವಿಯಾಗಿದ್ದು, ಬಳಿಕ ಅವುಗಳನ್ನು ಸುರಕ್ಷಿತ ದೂರಕ್ಕೆ ಹಿಂತಿರುಗಿಸಲಾಗಿದೆ.

ಉಪಗ್ರಹಗಳಲ್ಲಿನ ಕ್ಯಾಮೆರಾಗಳಿಂದ ತೆಗೆದ ಛಾಯಾಚಿತ್ರಗಳನ್ನು ಇಸ್ರೋ ಹಂಚಿಕೊಂಡಿದೆ. ಇಲ್ಲಿಯವರೆಗೆ ದೊರೆತಿರುವಂತಹ ದತ್ತಾಂಶದ ವಿಶ್ಲೇಷಣೆಯ ಬಳಿಕವೇ ಡಾಕಿಂಗ್ ಪ್ರಕ್ರಿಯೆಯನ್ನು ಮಾಡಲಾಗುತ್ತದೆ ಎಂದು ಭಾರತೀಯ ಬಾಹ್ಯಾಕಾಶ ಸಂಸ್ಥೆ- ಇಸ್ರೋ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದೆ.

ಈ ಕುರಿತು ಒಂದು ವರದಿ

ಡಾಕಿಂಗ್ ಕಾರ್ಯಾಚರಣೆಗಾಗಿ ಇಸ್ರೋ ಅಭಿವೃದ್ಧಿಪಡಿಸಿರುವ ಎಲ್ಲಾ ಸಂವೇದಕಗಳನ್ನು ಡಾಕಿಂಗ್ ಪ್ರಯೋಗಕ್ಕೂ ಮೊದಲು ಸಂಪೂರ್ಣವಾಗಿ ಪರೀಕ್ಷೆ ಮಾಡಬೇಕಿದೆ.

ಡಾಕಿಂಗ್ ನಂತರ, ಎರಡೂ ಉಪಗ್ರಹಗಳನ್ನು ಒಂದೇ ಬಾಹ್ಯಾಕಾಶ ನೌಕೆಯಾಗಿ ನಿಯಂತ್ರಿಸಲಾಗುತ್ತದೆ. ಡಾಕಿಂಗ್ ಯಶಸ್ವಿಯಾಗಿದೆಯೇ ಎಂದು ಪರಿಶೀಲಿಸಲು ವಿದ್ಯುತ್ ಶಕ್ತಿಯನ್ನು ಒಂದು ಉಪಗ್ರಹದಿಂದ ಇನ್ನೊಂದಕ್ಕೆ ವರ್ಗಾಯಿಸಲಾಗುತ್ತದೆ. ನಂತರ ಎರಡೂ ಉಪಗ್ರಹಗಳನ್ನು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಅನ್‌ಡಾಕ್ ಮಾಡಲಾಗುತ್ತದೆ. ಆ ಮೂಲಕ ಅಮೆರಿಕ, ರಷ್ಯಾ ಮತ್ತು ಚೀನಾ ನಂತರ ಈ ಸಾಧನೆಯನ್ನು ಮಾಡಿದ ನಾಲ್ಕನೇ ದೇಶವಾಗಿ ಭಾರತ ಹೊರಹೊಮ್ಮಲಿದೆ.

ಇಸ್ರೋ ಅಭಿವೃದ್ಧಿಪಡಿಸಿದ ಸ್ಥಳೀಯ ಭಾರತೀಯ ಡಾಕಿಂಗ್ ವ್ಯವಸ್ಥೆ ಯಶಸ್ವಿಯಾದರೆ, ಇಸ್ರೋ ತನ್ನ ಉದ್ದೇಶಿತ ಭಾರತೀಯ ಅಂತರಿಕ್ಷಾ ನಿಲ್ದಾಣದ ಕುರಿತು ಕಾರ್ಯೋನ್ಮುಖವಾಗಲು ಮತ್ತು ಚಂದ್ರಯಾನ ೪ ಕಾರ್ಯಾಚರಣೆಯನ್ನು ಪೂರ್ಣಗೊಳಿಸಲು ಸಹಕಾರಿಯಾಗಿದೆ.

***************

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳ ನಾಳೆ ಪುಣ್ಯ ಸ್ನಾನದೊಂದಿಗೆ ಆರಂಭವಾಗಲಿದೆ.

ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಭಕ್ತರು ಪುಣ್ಯ ಸ್ನಾನ ಮಾಡಲಿದ್ದಾರೆ. ೪೫ ದಿನಗಳ ಕಾಲ ನಡೆಯಲಿರುವ ಮಹಾಕುಂಭ ಮೇಳದಲ್ಲಿ ಲಕ್ಷಾಂತರ ಯಾತ್ರಿಕರು ಭಾಗವಹಿಸುತಿದ್ದು, ಇದಕ್ಕಾಗಿ ವ್ಯಾಪಕ ರಕ್ಷಣೆ, ಆರೋಗ್ಯ, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಆರೋಗ್ಯ ರಕ್ಷಣೆಗೆ ಪ್ರಾಮುಖ್ಯತೆ ನೀಡಲಾಗಿದ್ದು, ಇದೇ ದೃಷ್ಟಿಕೋನದೊಂದಿಗೆ ನೇತ್ರ ಕುಂಭ ಮೇಳ, ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಡಿ ಮೂರು ಲಕ್ಷ ಕನ್ನಡಕಗಳನ್ನು ವಿತರಿಸುವುದು ಮತ್ತು ಐದು ಲಕ್ಷ ಹೊರರೋಗಿಗಳನ್ನು ತಪಾಸಣೆ ಮಾಡುವುದು ಸೇರಿದಂತೆ ದಿನಕ್ಕೆ ಹತ್ತು ಸಾವಿರ ಸಮಾಲೋಚನೆಗಳ ಗುರಿಯನ್ನು ಹೊಂದಿದೆ. ನೇತ್ರ ಕುಂಭದಲ್ಲಿ ನೇತ್ರದಾನ ಶಿಬಿರವನ್ನು ನಡೆಸಲಾಗುತ್ತಿದೆ.

ಪರೇಡ್ ಮೈದಾನದಲ್ಲಿರುವ ಸೆಂಟ್ರಲ್ ಆಸ್ಪತ್ರೆಯು ೧೦೦ ಹಾಸಿಗೆಗಳನ್ನು ಹೊಂದಿದ್ದು, ಹೊರರೋಗಿ ಸಮಾಲೋಚನೆ ಜೊತೆಗೆ ಐಸಿಯು ಆರೈಕೆಯನ್ನು ಒಳಗೊಂಡಿದೆ. ಅರೈಲ್‌ನಲ್ಲಿರುವ ಸಬ್-ಸೆಂಟ್ರಲ್ ಆಸ್ಪತ್ರೆ ಮತ್ತು ಪ್ರಯಾಗ್‌ರಾಜ್ ಜಂಕ್ಷನ್, ನೈನಿ ಮತ್ತು ಸುಬೇದರ್‌ಗಂಜ್ ಸೇರಿದಂತೆ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ವೈದ್ಯಕೀಯ ತಪಾಸಣಾ ಕೊಠಡಿಗಳ ವ್ಯವಸ್ಥೆ ಮಾಡಲಾಗಿದೆ. ದೇಶಾದ್ಯಂತದ ೨೪೦ ವೈದ್ಯರ ತಂಡ ಮಹಾ ಕುಂಭಮೇಳದ ಆರೋಗ್ಯ ರಕ್ಷಣಾ ವ್ಯವಸ್ಥೆಯ ಭಾಗವಾಗಿದ್ದಾರೆ.

***************

ಅಮೆರಿಕದ ೪೭ನೇ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಡೊನಾಲ್ಡ್ ಟ್ರಂಪ್ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಭಾರತ ಸರ್ಕಾರವನ್ನು ಪ್ರತಿನಿಧಿಸಲಿದ್ದಾರೆ.

ಇದೇ ೨೦ ರಂದು ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆಯಲಿದೆ. ತಮ್ಮ ಭೇಟಿಯ ಸಮಯದಲ್ಲಿ ಡಾ.ಎಸ್.ಜೈಶಂಕರ್, ನೂತನ ಆಡಳಿತ ಪ್ರತಿನಿಧಿಗಳು ಮತ್ತು ಕಾರ್ಯಕ್ರಮದಲ್ಲಿ ಭಾಗವಹಿಸುವ ಇತರ ಗಣ್ಯರೊಂದಿಗೆ ಸಭೆ ನಡೆಸಲಿದ್ದಾರೆ.

****************

ಅಮೆರಿಕದ ಲಾಸ್ ಎಂಜಲಿಸ್ ಸುತ್ತಮುತ್ತ ಕಾಡ್ಗಿಚ್ಚು ಸಂಭವಿಸಿದ್ದು, ಸಾವನ್ನಪ್ಪಿದವರ ಸಂಖ್ಯೆ ೧೬ಕ್ಕೆ ಏರಿಕೆಯಾಗಿದೆ.

ಪ್ರಮುಖವಾಗಿ ಲಾಸ್ ಎಂಜಲಸ್ ಬಳಿಯ ಈಟಾನ್, ಹರ್ಸ್ಟ್, ಕೆನೆತ್ ಮತ್ತು ಪಾಲಿಸೇಡ್ಸ್ ಪ್ರದೇಶಗಳಲ್ಲಿ ಕಾಡ್ಗಿಚ್ಚು ಆವರಿಸಿದ್ದು, ಸುಮಾರು ೩೮ ಸಾವಿರದ ೨೭೬ ಎಕರೆ ಪ್ರದೇಶಗಳಾದ್ಯಂತ ಬೆಂಕೆ ವ್ಯಾಪಿಸಿದೆ. ಇದರ ಪರಿಣಾಮ ಸುಮಾರು ೧೨ ಸಾವಿರಕ್ಕೂ ಅಧಿಕ ಮನೆ ಹಾಗೂ ಇತರೆ ಕಟ್ಟಡಗಳು ಧ್ವಂಸಗೊಂಡಿವೆ. ೧ ಲಕ್ಷಕ್ಕೂ ಅಧಿಕ ನಿವಾಸಿಗಳಿಗೆ ಸ್ಥಳಾಂತರಗೊಳ್ಳಲು ಸೂಚಿಸಲಾಗಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯಚರಣೆಯಲ್ಲಿ ನಿರತರಾಗಿದ್ದಾರೆ.

****************

ರಾಂಚಿಯಲ್ಲಿ ಇಂದು ಸಂಜೆ ನಡೆಯಲಿರುವ ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ಡೆಲ್ಲಿ ಎಸ್‌ಜಿ ಪೈಪರ್ಸ್ ತಂಡ, ಒಡಿಶಾ ವಾರಿಯರ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೮.೪೦ ಕ್ಕೆ ಆರಂಭವಾಗಲಿದೆ.

****************

ಗುಜರಾತ್ ರಾಜಕೋಟ್‌ನಲ್ಲಿಂದು ನಡೆಯುತ್ತಿರುವ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಹಾಗೂ ಐರ್ಲೆಂಡ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದು, ಬ್ಯಾಟಿಂಗ್ ಆಯ್ದುಕೊಂಡಿರುವ ಭಾರತದ ವನಿತೆಯರ ತಂಡ, ಇತ್ತೀಚಿನ ವರದಿ ಬಂದಾಗ ೨ ವಿಕೆಟ್ ನಷ್ಟಕ್ಕೆ ೨೪೯ ರನ್ ಗಳಿಸಿ ಆಡುತ್ತಿದೆ.

ಬ್ಯಾಟಿಂಗ್ ಆರಂಭದಲ್ಲಿ ಸ್ಮೃತಿ ಮಂದಾನ ೭೩ ಹಾಗೂ ಪ್ರತಿಕಾ ರಾವಲ್ ೪೭ ರನ್ ಗಳಿಸಿ ಭಾರತ ತಂಡಕ್ಕೆ ಉತ್ತಮ ಆರಂಭ ನೀಡಿದ್ದಾರೆ.

ಶುಕ್ರವಾರ ನಡೆದ ಮೊದಲ ಪಂದ್ಯದಲ್ಲಿ ಭಾರತ ೬ ವಿಕೆಟ್‌ಗಳ ಜಯ ಸಾಧಿಸಿ ಸರಣಿಯಲ್ಲಿ ಮುನ್ನಡೆ ಸಾಧಿಸಿದೆ. ಸರಣಿಯ ಕೊನೆಯ ಪಂದ್ಯ ಇದೇ ೧೫ ರಂದು ನಡೆಯಲಿದೆ.

****************

ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ-ಬಿಸಿಸಿಐ, ಇಂಗ್ಲೆಂಡ್ ವಿರುದ್ಧದ ಅಂತಾರಾಷ್ಟ್ರೀಯ ಟಿ-೨೦ ಸರಣಿಗಾಗಿ ೧೫ ಸದಸ್ಯರ ತಂಡವನ್ನು ಪ್ರಕಟಿಸಿದೆ. ಸೂರ್ಯಕುಮಾರ್ ಯಾದವ್ ನಾಯಕರಾಗಿದ್ದು, ಅಕ್ಸರ್ ಪಟೇಲ್ ಉಪನಾಯಕರಾಗಿದ್ದಾರೆ.

ಮೊಹಮ್ಮದ್ ಶಮಿ, ಸಂಜು ಸಾಮ್ಸನ್, ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ರಿಂಕು ಸಿಂಗ್, ನಿತೀಶ್ ಕುಮಾರ್ ರೆಡ್ಡಿ, ಹರ್ಷೀತ್ ರಾಣಾ, ಹರ್ಷದೀಪ್ ಸಿಂಗ್, ವರುಣ್ ಚಕ್ರವರ್ತಿ, ರವಿ ಬಿಷ್ಣೋಯ್, ವಾಷಿಗ್ಟನ್ ಸುಂದರ್ ಮತ್ತು ಧೃವ ಜುರೆಲ್ ತಂಡದಲ್ಲಿ ಸ್ಥಾನಪಡೆದಿದ್ದಾರೆ. ಮೊದಲ ಪಂದ್ಯ ಕೋಲ್ಕತ್ತಾದಲ್ಲಿ ಇದೇ ೨೨ ರಂದು ನಡೆಯಲಿದೆ.

****************

ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಗ್ರ್ಯಾನ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನ ಪಂದ್ಯದಲ್ಲಿಂದು ಭಾರತದ ಭಾರತದ ಸುಮಿತ್ ನಗಾಲ್, ಜೆಕ್ ಗಣರಾಜ್ಯದ ಟೋಮಾಸ್ ಮೆಕಾಕ್ ಅವರನ್ನು ಎದುರಿಸಲಿದ್ದಾರೆ.

ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧.೪೦ ಕ್ಕೆ ಆರಂಭವಾಗುವ ನಿರೀಕ್ಷೆಯಿದೆ.

******** ಮುಕ್ತಾಯ ********